## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿನ ಮದರಸಗಳಿಗೆ ಆಧುನೀಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು ಅನುದಾನ ಬಿಡುಗಡೆ ಮಾಡಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:** 1. 2016-17ನೇ ಸಾಲಿನ ಆಯವ್ಯಯ ಭಾಷಣ.

2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ ಮ.ಆ.ಔ.ಕ.ಶಿ/ಸಿಆರ್-16/2016-17 ದಿ: 20.04.2016.

>>>()<<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ (1)ರಲ್ಲಿ 2016-17ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣದ ಕಂಡಿಕೆ 206 ರಲ್ಲಿ ರೂ.50.00 ಕೋಟಿ ವೆಚ್ಚದಲ್ಲಿ ರಾಜ್ಯದಲ್ಲಿನ ಮದರಸಗಳ ಆಧುನೀಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲಾಗುವುದೆಂದು ಘೋಷಿಸಿರುತ್ತಾರೆ.

ಕರ್ನಾಟಕ ರಾಜ್ಯವು ದೇಶದ ಅಭಿವೃದ್ಧಿ ಹೊಂದಿದ ರಾಜ್ಯಗಳಲ್ಲಿ ಒಂದಾಗಿದ್ದು, 2011ರ ಜನಗಣತಿಯಂತೆ ರಾಜ್ಯದ ಜನಸಂಖ್ಯೆ 610.95 ಲಕ್ಷ ಇದ್ದು ಅದರಲ್ಲಿ ಮತೀಯ ಅಲ್ಪಸಂಖ್ಯಾತರು 96.01 ಲಕ್ಷ ಇರುತ್ತದೆ. ಅದರಲ್ಲಿ ಮುಸ್ಲಿಂ ಸಮುದಾಯದವರು 78.94 ಲಕ್ಷ ಜನಸಂಖ್ಯೆ ಹೊಂದಿದ್ದು ರಾಜ್ಯದ ಜನಸಂಖ್ಯೆಯಲ್ಲಿ ಶೇ.12.91% ಪ್ರತಿಶತ ಇರುತ್ತಾರೆ.

ಮುಸ್ಲಿಂ ಸಮುದಾಯದಲ್ಲಿ ಧಾರ್ಮಿಕ ಅಧ್ಯಯನಕ್ಕೆ ಆದ್ಯತೆ ನೀಡಲಾಗಿದ್ದು, ಧಾರ್ಮಿಕ ಶಿಕ್ಷಣ ಪ್ರಾಥಮಿಕ ಹಂತದಲ್ಲಿ ಕಡ್ಡಾಯವಾಗಿ ನೀಡಲಾಗುತ್ತದೆ. ಸಮುದಾಯದ ಮಕ್ಕಳು ಸ್ಥಳೀಯ ಮಸೀದಿ/ಮದರಸಾಗಳಲ್ಲಿ ಧಾರ್ಮಿಕ ಶಿಕ್ಷಣವನ್ನು ಪಡೆಯುತ್ತಿರುತ್ತಾರೆ. ಕರ್ನಾಟಕ ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯ ಮದರಸಾಗಳು ಅಸಂಘಟಿತ ವ್ಯವಸ್ಥೆಯಲ್ಲಿದ್ದು ಮೂಲಭೂತ ಸೌಕರ್ಯಗಳಾದ ನೀರು, ಶೌಚಾಲಯ, ವಸತಿ ಸೌಲಭ್ಯ, ಭೋದಕ/ಭೋದಕೇತರ ಸಿಬ್ಬಂದಿಗಳ ಕೊರತೆ, ಪೀಠೋಪಕರಣ, ಗಣಕಯಂತ್ರ ಮತ್ತು ಗ್ರಂಥಾಲಯ ಮುಂತಾದ ಸೌಕರ್ಯಗಳಿಂದ ವಂಚಿತರಾಗಿವೆ. ಮುಖ್ಯವಾಗಿ ಔಪಚಾರಿಕ ಶಿಕ್ಷಣ ಹಾಗೂ ಕಂಪ್ಯೂಟರ್ ಜ್ಞಾನ ಇಲ್ಲಿನ ಮಕ್ಕಳಿಗೆ ಗಗನಕುಸುಮವಾಗಿದೆ.

"ಮದರಸಾಗಳ ದೈನಂದಿನ ಕಾರ್ಯಚಟುವಟಿಕೆಗಳು ಪಾರದರ್ಶಕವಾಗಿರದ ಕಾರಣ ತಪ್ಪು ಕಲ್ಪನೆಗಳಿಗೆ ಗುರಿಯಾಗಿವೆ. ಆದರೆ ನೈತಿಕ ಹಾಗೂ ಸುಸಂಸ್ಕೃತ ಸಮಾಜದ ನಿರ್ಮಾಣದಲ್ಲಿ ಇವುಗಳ ಕೊಡುಗೆ ನಿರಾಕರಿಸುವಂತಿರುವುದಿಲ್ಲ. ರಾಜ್ಯದಲ್ಲಿ ಸುಮಾರು 960 ಕ್ಕಿಂತಲೂ ಹೆಚ್ಚು ಮದರಸಗಳಿವೆಯೆಂದು ಅಂದಾಜಿಸಲಾಗಿದೆ. ಈ ಮದರಸಗಳಲ್ಲಿ ಕೆಳಕಂಡ ಕೊರತೆಗಳನ್ನು ಗಮನಿಸಲಾಗಿದೆ.

- ಹೆಚ್ಚಿನ ಮದರಸಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದೆ.
- ಸಾಮಾಜಿಕ ರಂಗದ ಚಟುವಟಿಕೆಗಳಲ್ಲಿ ಗುರುತಿಸಿಕೊಳ್ಳದಿರುವುದರಿಂದ ಸಮಾಜದ ಮುಖ್ಯವಾಹಿನಿಯಿಂದ ದೂರ ಸರಿದಿದ್ದಾರೆ.

- ❖ ಮದರಸಗಳಲ್ಲಿ ವಿದ್ಯಾರ್ಥಿಗಳ ಔಪಚಾರಿಕ ಶಿಕ್ಷಣ, ಕಂಪ್ಯೂಟರ್ ಶಿಕ್ಷಣ ಮತ್ತು ದೈಹಿಕ ಆರೋಗ್ಯಕ್ಕಾಗಿ ಕ್ರೀಡಾಚಟುವಟಿಕೆಗಳ ಪ್ರೋತ್ಸಾಹದ ಕೊರತೆ ಇರುತ್ತದೆ.
- ❖ ಹಲವು ಮದರಸಗಳಲ್ಲಿ ವಸತಿ, ಶೌಚಾಲಯ, ಶಾಲಾ ಕೊಠಡಿಗಳ ಸೌಲಭ್ಯದ ಕೊರತೆ ಇದೆ. ಒಂದೇ ಕೊಠಡಿಯಲ್ಲಿ ಸುಮಾರು ಮಕ್ಕಳು ಚಾಪೆ ಹಾಸಿ ಮಲಗುವುದನ್ನು ಗಮನಿಸಲಾಗಿದೆ.
- ❖ ಮದರಸಾಗಳಲ್ಲಿ ಉತ್ತೀರ್ಣವಾಗಿರುವವರು ಸಮಾಜದಲ್ಲಿ ಇತರರೊಂದಿಗೆ ಬೆರೆಯಲು ಮತ್ತು ತಮ್ಮ ಅಗತ್ಯಗಳಿಗಾಗಿ ಸಾರ್ವಜನಿಕ ಸಂವಹನ ನಡೆಸಲು ಭಾಷೆ ಹಾಗೂ ಆಧುನಿಕ ಸಲಕರಣೆಗಳ ಕೊರತೆ ಗಮನಿಸಲಾಗಿದೆ.

**ಈ ಕೊರತೆಗಳನ್ನು ನಿವಾರಿಸಲು ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾಗಿದೆ.**

- ❖ ಮದರಸಾಗಳ ಆಧುನೀಕರಣ.
- ❖ ಔಪಚಾರಿಕ ಶಿಕ್ಷಣ.
- ❖ ಗಣಕೀಕೃತ ಜ್ಞಾನ.
- ❖ ಶೌಚಾಲಯ, ಶಾಲಾ ಕೊಠಡಿ ಮತ್ತು ವಸತಿ ನಿಲಯ.
- ❖ ಗ್ರಂಥಾಲಯಾ, ಕ್ರೀಡಾ ಸಾಮಾಗ್ರಿಗಳು ಪೀಠೋಪಕರಣಗಳು ಮತ್ತು ಇತರೇ ಮೂಲಭೂತ ಸೌಕರ್ಯಗಳು ಒದಗಿಸುವುದು.

ರಾಜ್ಯದಲ್ಲಿನ ಎಲ್ಲಾ ಮದರಸಗಳನ್ನು ಆಧುನೀಕರಣಗೊಳಿಸಲು, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ, ಮೂಲಭೂತ ಸೌಕರ್ಯ ಒದಗಿಸಲು ಉದ್ದೇಶಿಸಿ, ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಮೇಲೆ ಓದಲಾದ (2)ರಲ್ಲಿ ಏಕಕಡತ ಪದ್ಧತಿಯನ್ವಯ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 175 ಎಂಡಿಎಸ್ 2016, ದಿನಾಂಕ: 03.01.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಕರ್ನಾಟಕ ರಾಜ್ಯದಲ್ಲಿ ನಡೆಸಲಾಗುತ್ತಿರುವ ಮುಸ್ಲಿಂ ಸಮುದಾಯದ ನೋಂದಾಯಿತ ಮದರಸಗಳನ್ನು ಆಧುನಿಕರಣಗೊಳಿಸಲು ಹಾಗೂ ಈ ಮದರಸಗಳಿಗೆ ಮೂಲಸೌಕರ್ಯವನ್ನು ಕಲ್ಪಿಸಲು ಮತ್ತು ಈ ಮದ್ರಸಾಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಔಪಚಾರಿಕ ಹಾಗೂ ಗಣಕೀಕೃತ ಶಿಕ್ಷಣವನ್ನು ನೀಡಲು ಯೋಜನೆಯನ್ನು 2016-17ನೇ ಸಾಲಿನಿಂದ ಈ ಆದೇಶದೊಂದಿಗೆ ಲಗತ್ತಿಸಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಹಾಗೂ 2016-17ನೇ ಸಾಲಿನಲ್ಲಿ ಈ ಯೋಜನೆಗೆ ಲೆಕ್ಕಶೀರ್ಷಿಕೆ: 2225-03-102-03-10ರಡಿ ಒದಗಿಸಲಾಗಿರುವ ರೂ. 5000.00 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-03-102-03-10, ಮದರಸಾದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ಒದಗಿಸುವುದು, ರಾಜ್ಯವಲಯ ಯೋಜನೆಯಡಿ 2016-17ನೇ ಸಾಲಿನಲ್ಲಿ ಒದಗಿಸಲಾದ ರೂ.50.00 ಕೋಟಿ ಅನುದಾನದಲ್ಲಿ ಭರಿಸತಕ್ಕದ್ದು.